ಶಾಲಾ ಸಂಕೀರ್ಣ ನಿರ್ಮಿಸಲು ಟೆಂಡರ್ ಕರೆಯಲಾಗಿದ್ದು, ಒಬ್ಬ ಟೆಂಡರದಾರರು ಟೆಂಡರ್‌ನಲ್ಲಿ ಭಾಗವಹಿಸಿದ್ದು, ತಾಂತ್ರಿಕ ಅಗತ್ಯತೆಗಳ ಕೊರತೆಯಿಂದ ತಿರಸ್ಕೃತವಾಗಿರುತ್ತದೆ. ದಿನಾಂಕ:1-07-2009ರಂದು ಮರು ಟೆಂಡರ್ ಕರೆಯಲಾಗಿದೆ. ತದನಂತರ, ಅರ್ಹ ಗುತ್ತಿಗೆದಾರರಿಗೆ ಕಾಮಗಾರಿ ಆದೇಶವನ್ನು ನೀಡಲಾಗುವುದು.

113 ಶ್ರೀ ಬಿದರೂರು. ಎಸ್ ವಿರೂಪಾಕ್ಷಪ್ಪ(ಗದಗ)
ರಾಮಚಂದ್ರಗೌಡ(ವೈದ್ಯಕೀಯ ಶಿಕ್ಷಣ ಸಚಿವರು)

1 ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಮೆಡಿಕಲ್ ಕಾಲೇಜು ಪ್ರಾರಂಭಿಸುವ ಯೋಜನೆಯು ಸರ್ಕಾರದ ಮುಂದಿದೆಯೇ;

ಇಲ್ಲ

2 ಹಾಗಿದ್ದಲ್ಲಿ, ಗದಗ ಜಿಲ್ಲೆ ಈ ಸೌಲಭ್ಯದಿಂದ ವಂಚಿತವಾಗಿರುವುದು ನಿಜವೇ;

ಉದ್ಭವಿಸುವುದಿಲ್ಲ

3 ಹಾಗಿದ್ದಲ್ಲಿ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಿ ಈ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಿ ಕೊಡುವುದು ಯಾವಾಗ;

ಉದ್ಭವಿಸುವುದಿಲ್ಲ

114 ಶ್ರೀ ಬಿದರೂರು ಎಸ್ ವಿರೂಪಾಕ್ಷ (ಗದಗ), ಎಂ.ಎಲ್.ಎ
ಪ್ರೊ.ಡಾ. ಮುಮ್ತಾಜ್ ಅಲಿ ಖಾನ್(ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) 2008-09ನೇ ಸಾಲಿನಲ್ಲಿ ವಕ್ಫ್ ಅನುದಾನವನ್ನು ಗದಗ ಜಿಲ್ಲೆಯಲ್ಲಿ ಬಿಡುಗಡೆ ಮಾಡಿರುವ ವಿವರವನ್ನು ಒದಗಿಸುವುದು;

2008-09ನೇ ಸಾಲಿನಲ್ಲಿ ಸಾಕಷ್ಟು ಅನುದಾನ ಲಭ್ಯವಿಲ್ಲದ ಕಾರಣ ಗದಗ ಜಿಲ್ಲೆಯಲ್ಲಿ ವಕ್ಫ್ ಸಂಸ್ಥೆಗಳಿಗೆ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ. ಹಾಗೂ 2008-09ನೇ ಸಾಲಿನಲ್ಲಿ ರಾಜ್ಯದ 7 ಜಿಲ್ಲೆಗಳಿಗೆ ಅನುದಾನ ಬಿಡುಗಡೆ ಮಾಡಬೇಕಾಗಿದ್ದು, ಇದರಲ್ಲಿ ಗದಗ ಜಿಲ್ಲೆಯೂ ಇರುತ್ತದೆ. ಪ್ರಸಕ್ತ ಸಾಲಿನಲ್ಲಿ ಈ ಜಿಲ್ಲೆಗಳನ್ನು ಆದ್ಯತೆ ಮೇರೆಗೆ ಪರಿಗಣಿಸಿ ವಕ್ಫ್ ಸಂಸ್ಥೆಗಳಿಗೆ ಅನುದಾನ ಬಿಡುಗಡೆಗೊಳಿಸಲಾಗುವುದು.

ಆ) ಶಾದಿಮಹಲ್ ನಿರ್ಮಾಣಕ್ಕಾಗಿ ಕೊಡಲ್ಪಟ್ಟಿರುವ ಅನುದಾನದ ಮೊತ್ತದ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆಯೇ? ಹಾಗಿದ್ದಲ್ಲಿ ವಿವರ ಒದಗಿಸುವುದು.

2008-09ನೇ ಸಾಲಿನಲ್ಲಿ ಶಾದಿಮಹಲ್/ಸಮುದಾಯ ಭವನ ನಿರ್ಮಾಣಕ್ಕಾಗಿ ರೂ.1099.50 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ವಿವರ ಅನುಬಂಧ-1ರಲ್ಲಿ ಲಗತ್ತಿಸಿದೆ.

ಶ್ರೀ ಬಿದರೂರು ಎಸ್.ವಿರೂಪಾಕ್ಷ (ಗದಗ) ವಿಧಾನ ಸಭೆಯ ಸದಸ್ಯರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 114 ಕ್ಕೆ

ಅನುಬಂಧ–1

(ರೂ.ಲಕ್ಷಗಳಲ್ಲಿ)

ಕ್ರ.ಸಂ.	ಜಿಲ್ಲೆ	ಬಿಡುಗಡೆ ಮಾಡಿದ ಅನುದಾನ
1	ಬೆಂಗಳೂರು (ನ)	20.00
2	ಬೆಂಗಳೂರು (ಗ್ರಾ)	–
3	ಬಾಗಲಕೋಟೆ	70.00
4	ಬೆಳಗಾಂ	56.50
5	ಬಳ್ಳಾರಿ	15.00
6	ಬೀದರ್	–
7	ಬಿಜಾಪುರ	119.00
8	ಚಾಮರಾಜನಗರ	41.00
9	ಚಿಕ್ಕಮಗಳೂರು	52.00
10	ಚಿತ್ರದುರ್ಗಾ	28.00
11	ಚಿಕ್ಕಬಳ್ಳಾಪುರ	17.50
12	ದಕ್ಷಿಣ ಕನ್ನಡ	111.50
13	ದಾವಣಗೆರೆ	40.50
14	ಧಾರವಾಡ	49.00
15	ಗದಗ	28.50
16	ಗುಲ್ಬರ್ಗಾ	43.50
17	ಹಾಸನ	40.00
18	ಹಾವೇರಿ	–
19	ಕೊಡಗು	–
20	ಕೋಲಾರ	15.00
21	ಕೊಪ್ಪಳ	–
22	ಮಂಡ್ಯ	33.50
23	ಮೈಸೂರು	120.00
24	ರಾಯಚೂರು	8.00
25	ರಾಮನಗರ	25.00
26	ಶಿವಮೊಗ್ಗ	67.50

27	ತುಮಕೂರು	31.00
28	ಉಡುಪಿ	15.00
29	ಉತ್ತರಕನ್ನಡ	52.50
30	ಒಟ್ಟು	**1099.50**

131 ಶ್ರೀ ಬಾಲಕೃಷ್ಣ ಹೆಚ್.ಪಿ (ಮಾಗಡಿ)

ಬಿ. ಶ್ರೀರಾಮುಲು(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಮನಗರ ಜಿಲ್ಲೆ, ಮಾಗಡಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯನ್ನು ಎಂದಿನಿಂದ 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೆ ಏರಿಸಲಾಯಿತು; ಇದರ ರೂಪುರೇಷೆಗಳೇನು:

ಸರ್ಕಾರಿ ಆದೇಶ ಸಂಖ್ಯೆ: ಆಕುಕ 86 ಸಿಜಿಎಸ್ 2005, ದಿನಾಂಕ: 4-01-2006 ರಲ್ಲಿ ಮಾಗಡಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯನ್ನು 30 ಹಾಸಿಗೆಗಳಿಂದ 100 ಹಾಸಿಗೆಗಳಿಗೆ ಮೇಲ್ದರ್ಜೆಗೇರಿಸಲಾಗಿದೆ.

100 ಹಾಸಿಗೆಗಳ ಸಾಮರ್ಥ್ಯಕ್ಕೆ ಕಟ್ಟಡ ಕಾಮಗಾರಿ ಕೈಗೊಳ್ಳಲು ರೂ. 230 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ದಿನಾಂಕ: 14-12-2006 ರಲ್ಲಿ ಮಂಜೂರಾತಿ ನೀಡಲಾಗಿದೆ. ಕಾಮಗಾರಿಯನ್ನು ಮೆ: ನಾಗಾರ್ಜುನ ಕನ್ಸಟ್ರಕ್ಷನ್ ಕಂಪನಿ, ಬೆಂಗಳೂರು ರವರಿಗೆ ವಹಿಸಲಾಗಿದೆ.

ಸದರಿ ಮೇಲ್ದರ್ಜೆಗೇರಿಸಿದ ಆಸ್ಪತ್ರೆಯಲ್ಲಿ ಹೆಚ್ಚುವರಿಯಾಗಿ ನೆಲಮಹಡಿಯಲ್ಲಿ ಮೇಜರ್ ಆಪರೇಷನ್ ಥಿಯೇಟರ್, ಹೆರಿಗೆ ಕೊಠಡಿ, ಕ್ಷ-ಕಿರಣ ಕೊಠಡಿ ಹಾಗೂ ಹಾಲಿ ಕಟ್ಟಡಕ್ಕೆ ನೀರು ಸರಬರಾಜು ಮತ್ತು ನೈರ್ಮಲೀಕರಣ ದುರಸ್ತಿ, ವಿದ್ಯುತ್ ಹಾಗೂ ಶೌಚಾಲಯ ದುರಸ್ತಿ ಮತ್ತು ಒಳ ಹಾಗೂ ಹೊರ ಗೋಡೆಗಳಿಗೆ ಮತ್ತು ಬಾಗಿಲು ಕಿಟಕಿಗಳಿಗೆ ಬಣ್ಣ ಹಚ್ಚುವುದು ಒಳಗೊಂಡಿರುತ್ತದೆ.

ಮೊದಲನೇ ಮಹಡಿಯಲ್ಲಿ ಕಿವಿ, ಮೂಗು ಮತ್ತು ಗಂಟಲು ತಜ್ಞರು, ಮೂಳೆ ತಜ್ಞರು, ಮಕ್ಕಳ ತಜ್ಞರು, ನೇತ್ರ ತಜ್ಞರು, ಕಛೇರಿ ಕೊಠಡಿಗಳು, ಪ್ರಯೋಗಾಲಯ, ರಕ್ತ ಶೇಕರಣಾ ಕೊಠಡಿ, ವಿಶೇಷ ವಾರ್ಡ್‌ಗಳು, ಶೌಚಾಲಯಗಳು ಹಾಗೂ ಸಭಾಂಗಣವನ್ನು ಒಳಗೊಂಡಿರುತ್ತದೆ.

ಆ) ಈ ಆಸ್ಪತ್ರೆಯ ಕಟ್ಟಡದ ಕಾಮಗಾರಿ ಪೂರ್ಣಗೊಂಡಿದೆಯೇ; ಹಾಗಿಲ್ಲದಿದ್ದಲ್ಲಿ, ಯಾವಾಗ ಪೂರ್ಣಗೊಳಿಸಲಾಗುವುದು;

ಕಾಮಗಾರಿಯು ಮುಕ್ತಾಯದ ಹಂತದಲ್ಲಿದೆ ಹಾಗೂ ಅಕ್ಟೋಬರ್-2009ರ ವೇಳೆಗೆ ಪೂರ್ಣಗೊಳಿಸಲಾಗುತ್ತದೆ.

ಇ) ಈ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿದ ಅನುಗುಣವಾಗಿ ವೈದ್ಯಕೀಯ ಹಾಗೂ ಇತರೆ ಸಿಬ್ಬಂದಿಯನ್ನು ನಿಯೋಜಿಸಲಾಗಿದೆಯೇ; ಹಾಗಿಲ್ಲದಿದ್ದಲ್ಲಿ, ಯಾವಾಗ ನಿಯೋಜಿಸಲಾಗುವುದು?